# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 806 (965)
ಸದಸ್ಯರ ಹೆಸರು : ಶ್ರೀ ಮಂಜುನಾಥ್ ಭಂಡಾರಿ
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 11.03.2026
ಉತ್ತರಿಸುವ ಸಚಿವರು : ಕಂದಾಯ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಹಾದು ಹೋಗುವ ಕಾಲುದಾರಿಗಳು ಮತ್ತು ವಿವಿಧ ರೀತಿಯ ರಸ್ತೆಗಳು ಗ್ರಾಮ ನಕ್ಷೆಯಲ್ಲಿ ದಾಖಲಿಸದೇ ಇರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಇಂತಹ ಪ್ರಕರಣಗಳನ್ನು ಆಯಾಯ ಜಿಲ್ಲಾ ಮಟ್ಟದಲ್ಲಿ ಕಂದಾಯ ದಾಖಲೆಗಳಲ್ಲಿ ದಾಖಲಿಸಿ ಸಮಸ್ಯೆ ಪರಿಹರಿಸಲು ಸರ್ಕಾರ ಯಾವ ರೀತಿಯ ಕ್ರಮವಹಿಸುತ್ತಿದೆ. | ಸರ್ಕಾರದ ಗಮನಕ್ಕೆ ಬಂದಿದೆ.<br><br>ಕಾಲುದಾರಿಗಳು ಮತ್ತು ವಿವಿಧ ರೀತಿಯ ರಸ್ತೆಗಳು ಗ್ರಾಮ ನಕ್ಷೆಯಲ್ಲಿ ದಾಖಲಿಸದೇ ಇರುವ ಸರ್ಕಾರಿ ಜಮೀನಿನ ಪ್ರಕರಣಗಳಲ್ಲಿ ಜಿಲ್ಲಾಧಿಕಾರಿಯವರು ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 71ರಡಿ ಕ್ರಮಕೈಗೊಳ್ಳಲು ಅವಕಾಶವಿದೆ.<br><br>ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 59ರಲ್ಲಿ ದಾರಿ ಹಕ್ಕುಗಳು ಮತ್ತು ಇತರೆ ಅನುಭೋಗದ ಹಕ್ಕುಗಳ ಬಗ್ಗೆ ತಿಳಿಸಲಾಗಿದ್ದು, ಸಂಬಂಧಪಟ್ಟ ಜಮೀನುಗಳ ಭಾಗಿದಾರರು ಒಪ್ಪಿರುವಂತೆ ಸಂದರ್ಭದಲ್ಲಿ ಹಕ್ಕುಗಳ ದಾಖಲೆ ರಿಜಿಸ್ಟರ್‌ನಲ್ಲಿ ನಮೂದು ಮಾಡಲು ಅವಕಾಶವಿರುತ್ತದೆ. |
| ಆ) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಹಲವು ವರ್ಷಗಳಿಂದ ಗ್ರಾಮ ಪಂಚಾಯಿತಿ, ತಾಲ್ಲೂಕು / ಜಿಲ್ಲಾ ಪಂಚಾಯಿತಿ, ಶಾಸಕರ, ಸಂಸದರ ಅನುದಾನಗಳಡಿ ರಸ್ತೆಗಳನ್ನು ಅಭಿವೃದ್ಧಿಪಡಿಸಲಾದರೂ, ಇನ್ನೂ ಖಾಸಗಿ ಜಮೀನುಗಳ ಮೂಲಕ ಹಾದು ಹೋಗುವ ಸಾರ್ವಜನಿಕ ರಸ್ತೆಗಳಾಗಿ ಅಧಿಕೃತ ದಾಖಲೆ ಮಾಡದಿರುವ ಪ್ರಕರಣಗಳು ಎಷ್ಟು; ಅದಕ್ಕೆ ಕಾರಣಗಳೇನು; ಯಾವಾಗ ದಾಖಲಿಸಲಾಗುವುದು. | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಇಂತಹ ಪ್ರಕರಣಗಳು ಇರುವುದಿಲ್ಲ. |

| | | |
|---|---|---|
| ಇ) | ಈ ಕಾಲುದಾರಿ ಮತ್ತು ರಸ್ತೆಗಳು ಗ್ರಾಮ ನಕ್ಷೆಯಲ್ಲಿ ಅಧಿಕೃತವಾಗಿ ದಾಖಲಿಸದೇ ಇರುವುದರಿಂದ ರಸ್ತೆ ಅಭಿವೃದ್ಧಿಗೆ ಅಡ್ಡಿಯಾಗಿರುವುದು, ವ್ಯಾಜ್ಯಗಳಲ್ಲಿ ಸಾರ್ವಜನಿಕ ರಸ್ತೆ ಎಂದು ಸಾಬೀತುಪಡಿಸಲು ತೊಂದರೆ, ಭೂ ಪರಿವರ್ತನೆ ಹಾಗೂ ಬಡಾವಣೆ ನಕ್ಷೆ ಅನುಮೋದಿಸುವಲ್ಲಿ ಅಡಚಣೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಈ ಸಮಸ್ಯೆ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕಾಲುದಾರಿಗಳು ಮತ್ತು ವಿವಿಧ ರೀತಿಯ ರಸ್ತೆಗಳು ಗ್ರಾಮ ನಕ್ಷೆಯಲ್ಲಿ ದಾಖಲಿಸದೇ ಇರುವ ಸರ್ಕಾರಿ ಜಮೀನಿನ ಪ್ರಕರಣಗಳಲ್ಲಿ ಜಿಲ್ಲಾಧಿಕಾರಿಯವರು ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 71ರಡಿ ಕ್ರಮಕೈಗೊಳ್ಳಲು ಅವಕಾಶವಿದೆ.<br><br>ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 59ರಲ್ಲಿ ದಾರಿ ಹಕ್ಕುಗಳು ಮತ್ತು ಇತರ ಅನುಭೋಗದ ಹಕ್ಕುಗಳ ಬಗ್ಗೆ ತಿಳಿಸಲಾಗಿದ್ದು, ಸಂಬಂಧಪಟ್ಟ ಜಮೀನುಗಳ ಭಾಗಿದಾರರು ಒಪ್ಪಿರುವಂತ ಸಂದರ್ಭದಲ್ಲಿ ಹಕ್ಕುಗಳ ದಾಖಲೆ ರಿಜಿಸ್ಟರ್‌ನಲ್ಲಿ ನಮೂದು ಮಾಡಲು ಅವಕಾಶವಿರುತ್ತದೆ |
| ಈ) | ರಾಜ್ಯದ ಎಲ್ಲಾ ನಗರ ಮತ್ತು ಗ್ರಾಮ ಪಂಚಾಯತ್ ವ್ಯಾಪ್ತಿಯ ಎಲ್ಲಾ ಕಾಲುದಾರಿಗಳು ಮತ್ತು ರಸ್ತೆಗಳ ನಿಖರ ವಿವರಗಳನ್ನು ಗ್ರಾಮ ನಕ್ಷೆಯಲ್ಲಿ ದಾಖಲಿಸಲು ಕಂದಾಯ ಇಲಾಖೆಯು ಯಾವ ನಿರ್ದೇಶನಗಳನ್ನು ನೀಡಿದೆ; ಈ ಪ್ರಕ್ರಿಯೆಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ? | ರಾಜ್ಯದ ನಗರ ಮತ್ತು ಗ್ರಾಮ ಪಂಚಾಯತ್ ವ್ಯಾಪ್ತಿಯ ಎಲ್ಲಾ ಕಾಲುದಾರಿಗಳು ಮತ್ತು ರಸ್ತೆಗಳ ನಿಖರ ವಿವರಗಳನ್ನು ಗ್ರಾಮ ನಕ್ಷೆಯಲ್ಲಿ ದಾಖಲಿಸಲು ರಹವಿರುವುದಿಲ್ಲ.<br>ಈ ಕಾಲುದಾರಿ ಮತ್ತು ರಸ್ತೆಗಳ ಬಗ್ಗೆ ಸಂಬಂಧಿಸಿದ ಸ್ಥಳೀಯ ಸಂಸ್ಥೆಗಳು ಮತ್ತು ಯೋಜನಾ ಪ್ರಾಧಿಕಾರಗಳಿಂದ ಯೋಜನಾ/ ವಿನ್ಯಾಸ ನಕ್ಷೆಗಳನ್ನು ತಯಾರಿಸುವ ವೇಳೆಯಲ್ಲಿ ಪರಿಶೀಲಿಸಿ ಕ್ರಮ ವಹಿಸಬೇಕಾಗುತ್ತದೆ. |

ಸಂಖ್ಯೆ: ಆರ್‌ಡಿ 42 ಎಲ್‌ಜಿಕ್ಯೂ 2026

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು